## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1253
ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 18-03-2025
ಉತ್ತರಿಸುವ ಸಚಿವರು : ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| ಅ) | ನಗರ ಪ್ರದೇಶದ ಎಲ್ಲಾ ಮನೆಗಳಿಗೆ ಕುಡಿಯುವ ನೀರನ್ನು ಅಮೃತ್-2.0 ಕೇಂದ್ರ ಪುರಸ್ಕೃತ ಯೋಜನೆಯಡಿ ಅನುಷ್ಠಾನಗೊಳಿಸಲಾಗುವುದು ಎಂದು ಆಯವ್ಯಯದಲ್ಲಿ ಘೋಷಿಸಿದ್ದು, ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿವೆ; | ಕೇಂದ್ರ ಪುರಸ್ಕೃತ ಅಮೃತ್-2.0 ಯೋಜನೆಯಡಿಯಲ್ಲಿ ನಗರ ಪ್ರದೇಶಗಳಲ್ಲಿ ಕುಡಿಯುವ ನೀರನ್ನು ಒದಗಿಸುವ ಕಾಮಗಾರಿಗಳ ಪ್ರಸ್ತುತ ಹಂತದ ವಿವರ ಕೆಳಕಂಡಂತಿದೆ;<br>• ರೂ.7071 ಕೋಟಿ ಮೊತ್ತದ 171 ಕಾಮಗಾರಿಗಳಿಗೆ ಗುತ್ತಿಗೆಯನ್ನು ನೀಡಲಾಗಿದೆ.<br>• ರೂ.360 ಕೋಟಿ ಮೊತ್ತದ 15 ಕಾಮಗಾರಿಗಳಿಗೆ ಒಪ್ಪಂದ ಪತ್ರವನ್ನು ಗುತ್ತಿಗೆದಾರರಿಗೆ ನೀಡಲಾಗಿದೆ.<br>• ರೂ. 622 ಕೋಟಿ ಮೊತ್ತದ 15 ಕಾಮಗಾರಿಗಳ ಟೆಂಡರ್ ಪರಿಶೀಲನಾ ಹಂತದಲ್ಲಿರುತ್ತದೆ.<br>• ರೂ.640 ಕೋಟಿ ಮೊತ್ತದ 13 ಕಾಮಗಾರಿಗಳು ಟೆಂಡರ್ ಹಂತದಲ್ಲಿರುತ್ತವೆ.<br>• ರೂ.589 ಕೋಟಿಗಳ ಮೊತ್ತದ 13 ಕಾಮಗಾರಿಗಳ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗುತ್ತಿದೆ. |
| ಆ) | ಜನವರಿ-2025ರವರೆಗೆ ಈ ಕಾಮಗಾರಿಯಡಿ ಎಷ್ಟು ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕ ನೀಡಲಾಗಿದೆ; | ಜನವರಿ-2025ರವರೆಗೆ ಈ ಕಾಮಗಾರಿಯಡಿ 33,222 ಮನೆಗಳಿಗೆ ಕುಡಿಯುವ ನೀರಿನ ಸಂಪರ್ಕ ನೀಡಲಾಗಿದೆ. |
| ಇ) | ಈ ಹಿಂದೆ 320 ಕೋಟಿ ರೂ.ಗಳ ಅನುದಾನದಲ್ಲಿ ನೀಡಲಾದ ನೀರಿನ ಸಂಪರ್ಕ ಯೋಜನೆಯಲ್ಲಿ ಕುಡಿಯುವ ನೀರು ಸಂಪರ್ಕವನ್ನು ನೀಡದೇ ಅನೇಕ ಕುಟುಂಬಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಕೇಂದ್ರ ಪುರಸ್ಕೃತ ಅಮೃತ್-2.0 ಯೋಜನಾ ಅವಧಿ ಸೆಪ್ಟಂಬರ್ 2026 ವರೆಗೆ ಇರುತ್ತದೆ. ಪ್ರಸ್ತುತ, ಸದರಿ ಕಾರ್ಯಕ್ರಮದ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಕಾಮಗಾರಿಗಳು ಪೂರ್ಣಗೊಂಡ ನಂತರ 8,95,233 ಸಂಖ್ಯೆ ಕುಡಿಯುವ ನೀರಿನ ಗೃಹ ಸಂಪರ್ಕಗಳನ್ನು ಒದಗಿಸಲಾಗುವುದು. |

ಸಂಖ್ಯೆ: ನಅಇ 77 ಸಿಎಸ್ಎಸ್ 2025

(ಬಿ.ಎಸ್.ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು